ದೂರವಾಣಿ ಸಂಖ್ಯೆ : 080-22212343
ಫ್ಯಾಕ್ಸ್ ಸಂಖ್ಯೆ : 080-22278803
Website : https://kptcl.karnataka.gov.in

ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್.) : ಯು40109ಕೆಎ1999ಎಸ್‌ಜಿಸಿ025521
ಕಂಪನಿಯ ಅಧಿಕೃತ ಕಛೇರಿ : ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು-560 009

ಸಂಖ್ಯೆ: ಕವಿಪ್ರನಿನಿ/ಬಿ14/4957/2008-09

ದಿನಾಂಕ : 07 SEP 2021

**ಓದಲಾಗಿದೆ:**

ನಿಗಮದ ಅನುಮೋದಿತ ಟಿಪ್ಪಣಿ ದಿನಾಂಕ: 07.09.2021.

**ಪೀಠಿಕೆ:**

ಕವಿಪ್ರನಿನಿ ಸಂಸ್ಥೆಯು ತಾಂತ್ರಿಕ ಆಧಾರಿತ ಸಂಸ್ಥೆಯಾಗಿದ್ದು, ನಿಗಮ ಕಾರ್ಯಾಲಯವು ಒಳಗೊಂಡಂತೆ ರಾಜ್ಯ ವ್ಯಾಪ್ತಿಯಲ್ಲಿ ಅಧೀನ ಕಛೇರಿಗಳನ್ನು ಹೊಂದಿದ್ದು, ಆಡಳಿತಾತ್ಮಕ, ತಾಂತ್ರಿಕ ಹಾಗೂ ಲೆಕ್ಕ ಪತ್ರ/ಸಿಬ್ಬಂದಿ ಶಾಖೆಗಳಲ್ಲಿನ ತುರ್ತು ಕಾರ್ಯ ನಿರ್ವಹಣೆಗಾಗಿ ನಿರ್ದಿಷ್ಟ ಕೆಲಸಕ್ಕೆ ಹಾಗೂ ನಿರ್ದಿಷ್ಟ ಅವಧಿಗೆ ಹೊರಗಿನ ಏಜೆನ್ಸಿ ಮೂಲಕ ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯ ನಿರ್ವಹಿಸಲು ಡಾಟಾ ಎಂಟ್ರಿ ಆಪರೇಟರ್‌ಗಳು, ಕಛೇರಿ ಪರಿಚಾರಕ ಹಾಗೂ ನಿಗಮ ಕಾರ್ಯಾಲಯಕ್ಕೆ ಓರ್ವ ಸ್ವಾಗತಕಾರಿಣಿ ಸೇವೆಗಳನ್ನು ಪಡೆಯಲಾಗಿದ್ದು, ಸದರಿ ಕೆಲಸಗಾರರ ಸಮಯ ನಿಷ್ಠೆ ಹಾಗೂ ಕರ್ತವ್ಯ ದಕ್ಷತೆಯನ್ನು ಉತ್ತೇಜಿಸುವ ದೃಷ್ಟಿಯಿಂದ ದಿನಾಂಕ: 10.09.2021 ರಂದು ಆಚರಿಸಲ್ಪಡುವ ಗೌರಿ-ಗಣೇಶ ಹಬ್ಬದ ಪ್ರಯುಕ್ತ 'ಪ್ರೋತ್ಸಾಹಧನ'ವನ್ನು (Incentive) ಪಾವತಿಸಲು ನಿರ್ಧರಿಸಿರುವುದರಿಂದ ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಆದೇಶ ಸಂಖ್ಯೆ: ಕವಿಪ್ರನಿನಿ/ಔಬಾ/ಬಿ14/4957/2008-09 ಬೆಂಗಳೂರು**

ಕ.ವಿ.ಪ್ರ.ನಿ.ನಿ. ನಿಗಮ ಕಾರ್ಯಾಲಯ, ವಲಯ ಕಛೇರಿಗಳು ಹಾಗೂ ಇತರೆ ಅಧೀನ ಕಛೇರಿಗಳಲ್ಲಿ ಹೊರ ಗುತ್ತಿಗೆ ಆಧಾರದ ಮೇಲೆ, ಈ ಆದೇಶದ ದಿನಾಂಕಕ್ಕೆ ಕನಿಷ್ಟ ಒಂದು ವರ್ಷ ಸೇವೆ ಪೂರೈಸಿರುವ ಎಲ್ಲಾ ಡಾಟಾ ಎಂಟ್ರಿ ಆಪರೇಟರ್‌ಗಳು, ಕಛೇರಿ ಪರಿಚಾರಕರು ಹಾಗೂ ನಿಗಮ ಕಾರ್ಯಾಲಯದ ಸ್ವಾಗತಕಾರಿಣಿಗೆ ದಿನಾಂಕ: 10.09.2021 ರಂದು ಆಚರಿಸಲ್ಪಡುವ ಗೌರಿ-ಗಣೇಶ ಹಬ್ಬದ ಪ್ರಯುಕ್ತ "ಪ್ರೋತ್ಸಾಹಧನ"ವಾಗಿ (Incentive) ರೂ.1,000/-+GST ಅನ್ನು (ರೂ. ಒಂದು ಸಾವಿರ ಮತ್ತು ಜಿ.ಎಸ್.ಟಿ ಸೇರಿಸಿ ಒಟ್ಟು 1180/-) ಹೊರಗುತ್ತಿಗೆ ಆಧಾರದ ಮೇಲೆ ಸೇವೆಯನ್ನು ಒದಗಿಸಿರುವ ಏಜೆನ್ಸಿಯವರು ಮುಂಗಡವಾಗಿ ಕೂಡಲೇ ಪಾವತಿಸಿ, ಪಾವತಿಸಿರುವ ಬಗ್ಗೆ ಪೂರಕ ದಾಖಲಾತಿಗಳನ್ನು ಸಂಬಂಧಿಸಿದ ವೇತನ ಬಟವಾಡೆ ಅಧಿಕಾರಿಗಳಿಗೆ ಸಲ್ಲಿಸಿ, ಮರು ಪಾವತಿ ಪಡೆಯುವಂತೆ ಆದೇಶಿಸಲಾಗಿದೆ.

ಮುಂದುವರೆದು, ಸಂಬಂಧಪಟ್ಟ ಹೊರಗುತ್ತಿಗೆ ಕೆಲಸಗಾರರಿಗೆ ಪ್ರೋತ್ಸಾಹ ಧನವನ್ನು ಮುಂಗಡವಾಗಿ ಪಾವತಿಸಿರುವ ಬಗ್ಗೆ ಧೃಡೀಕರಿಸಿ ಸಲ್ಲಿಸಿರುವ ದಾಖಲಾತಿಗಳನ್ನು ಪರಿಶೀಲಿಸಿದ ನಂತರ, ಸದರಿ ಏಜೆನ್ಸಿಯವರ ಬಿಲ್ಲುಗಳನ್ನು ಅನುಮೋದಿಸುವಂತೆ ಬಟವಾಡೆ ಅಧಿಕಾರಿಗಳಿಗೆ ಸೂಚಿಸಿದೆ.

ಮಾನ್ಯ ವ್ಯವಸ್ಥಾಪಕ ನಿರ್ದೇಶಕರು ಕವಿಪ್ರನಿನಿ
ರವರಿಂದ ಅನುಮೋದಿಸಲ್ಪಟ್ಟಿದೆ

ನಿರ್ದೇಶಕರು (ಆ ಮತ್ತು ಮಾಸಂ)
ಕವಿಪ್ರನಿನಿ

ಪ್ರತಿಗಳು:

1. ನಿರ್ದೇಶಕರು (ಆಡಳಿತ), ರಾಜ್ಯ ವಿದ್ಯುನ್ಮಾನ ಅಭಿವೃದ್ಧಿ ನಿಗಮ ನಿಯಮಿತ, 2ನೇ ಮಹಡಿ, ಟಿ.ಟಿ.ಎಂ.ಸಿ 'ಎ' ಬ್ಲಾಕ್, ಬಿ.ಎಂ.ಟಿ.ಸಿ, ಕಾಂಪ್ಲೆಕ್ಸ್, ಶಾಂತಿನಗರ, ಕೆ.ಹೆಚ್.ರೋಡ್, ಬೆಂಗಳೂರು-27 ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.

2. ಮೆ/ವಿಶ್ವಿನ್ ಟೆಕ್ನಾಲಜೀಸ್ ಪ್ರೈವೇಟ್ ಲಿಮಿಟೆಡ್, ನಂ 3359, 2ನೇ ಮಹಡಿ, ವಿಶ್ವಭಾರತಿ, ಹೆಬಿಸಿಎಸ್, ಹೊಸಕೇರಹಳ್ಳಿ ಕ್ರಾಸ್, ಗಿರಿನಗರ 4ನೇ ಹಂತ, ಬಿಎಸ್‌ಕೆ , 3ನೇ ಹಂತ, ಬೆಂಗಳೂರು-560085 ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
3. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ.
4. ಎಲ್ಲಾ ಮುಖ್ಯ ಇಂಜಿನಿಯರ್(ವಿ), ಕವಿಪ್ರನಿನಿ.
5. ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು (ಪ್ರಸರಣ) / ನಿರ್ದೇಶಕರು (ಹಣಕಾಸು) /ನಿರ್ದೇಶಕರು (ಆ ಮತ್ತು ಮಾ.ಸಂ),ಕವಿಪ್ರನಿನಿ ಇವರುಗಳ ಹಿರಿಯ ಆಪ್ತ ಕಾರ್ಯದರ್ಶಿಗಳು

ಪ್ರತಿಯನ್ನು ಈ ಕೆಳಕಂಡವರ ಅಗತ್ಯ ಕ್ರಮಕ್ಕಾಗಿ www.kptcl.karnataka.gov.in ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ.

6. ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿ)/ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ.
7. ಕಂಪನಿ ಕಾರ್ಯದರ್ಶಿಗಳು, ಕವಿಪ್ರನಿನಿ, ಕಾವೇರಿಭವನ
8. ಎಲ್ಲಾ ಕಾರ್ಯ ನಿರ್ವಾಹಕ ಇಂಜಿನಿಯರ್(ವಿ)/ಉಪ ಲೆಕ್ಕ ನಿಯಂತ್ರಣಾಧಿಕಾರಿ, ಕವಿಪ್ರನಿನಿ.
9. ಎಲ್ಲಾ ಲೆಕ್ಕಾಧಿಕಾರಿ (ಆಂ. ಪ.), ಕವಿಪ್ರನಿನಿ.
10. ಕ್ರೋಢೀಕರಣ ಘಟಕ, ಕವಿಪ್ರನಿನಿ, ಕಾವೇರಿಭವನ, ಬೆಂಗಳೂರು.